# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 215, ಕತ್ರಿಗುಪ್ಪೆ, ಬೆಂಗಳೂರು.
## ಸೆಪ್ಟಂಬರ್-2022ರ ಮಾಹೆಯ 3ನೇ ಶನಿವಾರದ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ವಾರ್ಡ್ ಸಂಖ್ಯೆ: 215, ಕತ್ರಿಗುಪ್ಪೆಯಲ್ಲಿ ವಾರ್ಡ್ ಕಛೇರಿಯಲ್ಲಿ ನಡೆದ ಸೆಪ್ಟಂಬರ್ ತಿಂಗಳ 3ನೇ ಶನಿವಾರದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

*****

ದಿನಾಂಕ: 17-09-2022

ಸ್ಥಳ : ಕೆ.ಎಸ್. ನರಸಿಂಹಸ್ವಾಮಿ ಪಾರ್ಕ್ ಹತ್ತಿರ, ವಾಟರ್ ಟ್ಯಾಂಕ್ ರಸ್ತೆ, ಕತ್ರಿಗುಪ್ಪೆ ಬೆಂಗಳೂರು.

ಸಮಯ : ಸಂಜೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1. | ಶ್ರೀ ದಯಾನಂದ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಕುಮಾರಿ ರಂಜಿತಾ ಕೆ.ಆರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 163, ಕತ್ರಿಗುಪ್ಪೆ |
| 3. | ಶ್ರೀ ಗಂಗಾಧರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 163 |
| 4. | ಶ್ರೀ ಉಮೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-163 |
| 5. | ಶ್ರೀ ಲಕ್ಷ್ಮಿ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-163 |
| 6. | ಕುಮಾರಿ ಕೃತಿ | ವೈದ್ಯಾಧಿಕಾರಿಗಳು (ಕೋವಿಡ್-19) |
| 7. | ಶ್ರೀ ಮಂಜುನಾಥ್ | ಸಂಚಾರಿ ಪೋಲೀಸ್ ಇನ್ಸ್‌ಪೆಕ್ಟರ್ |
| 8. | ಶ್ರೀಮತಿ ಕುಮುದ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರು |
| 9. | ಶ್ರೀ ಮಲ್ಲಿಕಾರ್ಜುನ್ .ಕೆ | ಮಾರ್ಷಲ್ |
| 10. | ಶ್ರೀ ಶಿವಪ್ಪ | ಸಾರ್ವಜನಿಕರು |
| 11. | ಶ್ರೀ ಹರಿಚಂದ್ರ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ದಯಾನಂದ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಕತ್ರಿಗುಪ್ಪೆ ವಾರ್ಡ್-215ರ ವ್ಯಾಪ್ತಿಯಲ್ಲಿನ ಕತ್ರಿಗುಪ್ಪೆ ಮುಖ್ಯರಸ್ತೆಯ ಹೆಬ್ಬಾಗಿಲು ಹತ್ತಿರ ಇರುವ ಅಡ್ಡರಸ್ತೆಯಲ್ಲಿ ತ್ಯಾಜ್ಯವನ್ನು ಸುರಿಯುತ್ತಿದ್ದು, ಸದರಿ ಪ್ರದೇಶದಲ್ಲಿ ಸಾರ್ವಜನಿಕರು ಮೂತ್ರ ವಿಸರ್ಜನೆ ಮಾಡುತ್ತಿರುವುದರಿಂದ ಸುತ್ತಮುತ್ತಲು ವಾಸಿಸುತ್ತಿರುವ ಜನರಿಗೆ ಸಾಂಕ್ರಾಮಿಕ ರೋಗಗಳು ಹರಡುವ ಸಂಭವವಿರುತ್ತದೆ ಎಂದು ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆಯಲ್ಲಿ ಸಭೆಯಲ್ಲಿ ಹಾಜರಿದ್ದ ಘನತ್ಯಾಜ್ಯ ಅಧಿಕಾರಿಗಳಿಗೆ ಸದರಿ ಪ್ರದೇಶದಲ್ಲಿ ತ್ಯಾಜ್ಯವನ್ನು ಸುರಿಯದಂತೆ ಹಾಗೂ ಮೂತ್ರ ವಿಸರ್ಜನೆ ಮಾಡದಂತೆ ಕ್ರಮವಹಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿರುತ್ತಾರೆ.

2. ವಾರ್ಡ್-215ರ ವ್ಯಾಪ್ತಿಯಲ್ಲಿನ ಕತ್ರಿಗುಪ್ಪೆ ಮುಖ್ಯರಸ್ತೆಯ 1ನೇ ಅಡ್ಡರಸ್ತೆ ಇಲ್ಲಿನ ಚರಂಡಿಗಳಲ್ಲಿ ಮಳೆ ನೀರು ಸರಾಗವಾಗಿ ಹರಿಯುತ್ತಿಲ್ಲವಾದ್ದರಿಂದ ಸದರಿ ಚರಂಡಿಯಲ್ಲಿನ ಹೂಳನ್ನು ತೆಗೆಯಬೇಕೆಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಮನವಿ ಮಾಡಲಾಗಿದ್ದು, ಸದರಿ ಚರಂಡಿಯ ಹೂಳನ್ನು ತೆಗೆದು ಮಳೆ ನೀರು ಸರಾಗವಾಗಿ ಹರಿಯುಲು ಕ್ರಮವಹಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿರುತ್ತಾರೆ.

3. ವಾರ್ಡ್ ವ್ಯಾಪ್ತಿಯ ಪೈ ಶೋ ರೂಮ್ ಹತ್ತಿರ, ವಾಟರ್ ಟ್ಯಾಂಕ್ ರಸ್ತೆ ಇಲ್ಲಿ ನೀರಿನ ಪೈಪ್ ಹೊಡೆದು ನೀರು ಲೀಕ್ ಆಗುತ್ತಿರುವುದರಿಂದ ಸದರಿ ಪೈಪುಗಳನ್ನು ಕೂಡಲೇ ಸರಿಪಡಿಸಲು ಕ್ರಮವಹಿಸುವಂತೆ ಸಂಬಂಧಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ತಿಳಿಸಲಾಯಿತು.

4. ವಾರ್ಡ್ ವ್ಯಾಪ್ತಿಯಲ್ಲಿನ ಶ್ರೀನಿವಾಸನಗರ 3ನೇ ಕ್ರಾಸ್, 80 ಅಡಿರಸ್ತೆಯ 9ನೇ ಮುಖ್ಯರಸ್ತೆ, ಕತ್ರಿಗುಪ್ಪೆ ಮುಖ್ಯರಸ್ತೆಯ ಲಾರಿ ಪಾಯಿಂಟ್ ಪ್ರದೇಶಗಳು ಬ್ಲಾಕ್ ಸ್ಪಾಟ್ ಆಗಿ ಪರಿಣಮಿಸುತ್ತಿರುತ್ತದೆ. ಆದುದರಿಂದ, ಸದರಿ ಪ್ರದೇಶದಿಂದ ತ್ಯಾಜ್ಯವನ್ನು ತೆರವುಗೊಳಿಸಿ, ಸದರಿ ಸ್ಥಳದಲ್ಲಿ ಮತ್ತೊಮ್ಮೆ ತ್ಯಾಜ್ಯವನ್ನು ಸುರಿಯದಂತೆ ಕ್ರಮವಹಿಸಬೇಕೆಂದು ಹಾಗೂ ಸದರಿ ಪ್ರದೇಶಗಳಲ್ಲಿ ತ್ಯಾಜ್ಯವನ್ನು ಸುರಿಯುವ ಸಾರ್ವಜನಿಕರಿಗೆ ದಂಡ ವಿಧಿಸಲು ವಾರ್ಡ್ ಮಾರ್ಷಲ್ ರವರಿಗೆ ಸೂಚಿಸಲು ಘನತ್ಯಾಜ್ಯ ನಿರ್ವಹಣೆ ಅಧಿಕಾರಿಗಳಿಗೆ ಸಭೆಯಲ್ಲಿ ಅಧ್ಯಕ್ಷರು ತಿಳಿಸಿರುತ್ತಾರೆ.

5. ವಾರ್ಡ್ ವ್ಯಾಪ್ತಿಯಲ್ಲಿನ ಬ್ಯಾಂಕ್ ಕಾಲೋನಿ 12ನೇ ಮುಖ್ಯರಸ್ತೆಯಲ್ಲಿ ಪುಂಡರು ಮದ್ಯಪಾನ ಮಾಡಿರುವ ಬಾಟಲಿಗಳನ್ನು ರಸ್ತೆ ಹೊಡೆದು ಹಾಕಿ ಗಾಜಿನ ಚೂರುಗಳು ರಸ್ತೆಯಲ್ಲಿ ಹರಡುವಂತೆ ಮಾಡುತ್ತಿರುತ್ತಾರೆ. ಆದುದರಿಂದ, ಸದರಿ ಪುಂಡರನ್ನು ನಿಯಂತ್ರಸುವಂತೆ ಪೋಲೀಸ್ ಅಧಿಕಾರಿಗಳಿಗೆ ಪತ್ರ ಬರೆಯುವಂತೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿರುತ್ತಾರೆ.

6. ವಾರ್ಡ್ ವ್ಯಾಪ್ತಿಯಲ್ಲಿನ 4ನೇ ಮುಖ್ಯರಸ್ತೆ, ವಾಟರ್ ಟ್ಯಾಂಕ್ ರಸ್ತೆ ಇಲ್ಲಿ ವಿದ್ಯುತ್ ಕಂಬ ವಾಲಿದ್ದು, ಯಾವುದೇ ಸಂದರ್ಭದಲ್ಲಿಯಾದರು ಬೀಳುವ ಸಂಭವವಿರುತ್ತದೆ. ಆದುದರಿಂದ, ಸದರಿ ಕಂಬವನ್ನು ಕೂಡಲೇ ದುರಸ್ಥಿ ಅಥವಾ ಬೇರೆಡೆಗೆ ಸ್ಥಳಾಂತರಿಸಬೇಕೆಂದು ಕೋರಿ ಬೆಸ್ಕಾಂ ರವರಿಗೆ ಪತ್ರ ಬರೆಯುವಂತೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿರುತ್ತಾರೆ.

7. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು, ರಸ್ತೆಗಳಲ್ಲಿ ಓಡಾಡುವ ಸಾರ್ವಜನಿಕರು ಕಚ್ಚುತ್ತಿರುವುದಾಗಿ ದೂರುಗಳು ಬಂದಿದ್ದು, ಸದರಿ ಬೀದಿ ನಾಯಿಗಳನ್ನು ನಿಯಂತ್ರಿಸಲು ಪಶು ಸಂಗೋಪನಾ ಇಲಾಖೆರವರಿಗೆ ಪತ್ರ ಬರೆಯಲು ಸಭೆಯಲ್ಲಿ ಹಾಜರಿದ್ದ ಪಶು ಸಂಗೋಪನಾ ಇಲಾಖೆಯ ಇನ್ಸ್‌ಪೆಕ್ಟರ್ ಆದ ಹನುಮಂತರಾಜು ರವರಿಗೆ ಅಧ್ಯಕ್ಷರು ತಿಳಿಸಿರುತ್ತಾರೆ.

8. ವಾರ್ಡ್ ವ್ಯಾಪ್ತಿಯ 80 ಅಡಿರಸ್ತೆಯ 7ನೇ ಮುಖ್ಯರಸ್ತೆಯಲ್ಲಿನ ಬಾಟಾ ಶೋ ರೂಮ್ ಹತ್ತಿರದಲ್ಲಿರುವ ಚರಂಡಿಯ ಮೇಲಭಾಗದ ಸ್ಲ್ಯಾಬ್‌ಗಳ ಕಾಮಗಾರಿ ಪೂರ್ಣಗೊಂಡು 01 ವರ್ಷ ಆಗಿದ್ದು, ಸದರಿ ಸ್ಲ್ಯಾಬ್‌ಗಳು ಅಲುಗಾಡುತ್ತಿರುವುದರಿಂದ ಮೇಜರ್ ರೋಡ್ಸ್ ಅಧಿಕಾರಿಗಳಿಗೆ ಪತ್ರ ಬರೆಯುವಂತೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

17/09/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ